## ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು

## ಸಿ.ಸಿ ನಂ.542/2023

| | | | |
|---|---|---|---|
| ಸಾಕ್ಷಿದಾರರ ಹೆಸರು | – | ಪಾಂಡುರಂಗಪ್ಪ | ಸಿಡಬ್ಲ್ಯೂ-1 |
| ತಂದೆಯ ಹೆಸರು | – | ರಂಗದಾಸಪ್ಪ | ಪಿಡಬ್ಲ್ಯೂ-1 |
| ವಯಸ್ಸು | – | 60 ವರ್ಷ | |
| ಉದ್ಯೋಗ | – | ವ್ಯವಸಾಯ | |
| ವಾಸ | – | ಎಂ ಡಿ ಕೋಟೆ ಗ್ರಾಮ | |

**ದಿನಾಂಕಃ 13-05-2025 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.**

**ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ**

ನನಗೆ ಚಾಸಾ.8 ರಿಂದ 12 ಗೊತ್ತಿಲ್ಲ. ಮೃತ ಶ್ರೀಧರ ನನ್ನ ಮಗ. ಆತ ರಸ್ತೆ ಅಪಘಾತದಲ್ಲಿ ಮೃತ ಪಟ್ಟಿದ್ದಾನೆ. ಈಗ್ಗೆ 2 ವರ್ಷಗಳ ಹಿಂದೆ ನನ್ನ ಮಗ ಮಾರಿಕಣಿವೆ ಡ್ಯಾಮ್ ನೋಡಲು ಹೋಗಿದ್ದ. ಅವರ ಜೊತೆ ಚಾಸಾ.8, 9 ರವರು ಬೈಕ್ ನಲ್ಲಿ ಹೋಗುತ್ತಿದ್ದರು. ಮಾರಿಕಣಿವೆ ಬಳಿ ಅಪಘಾತವಾಗಿದೆ ಎಂದು ನನಗೆ ಫೋನ್ ಮಾಡಿ ತಿಳಿಸಿದರು. ತಕ್ಷಣ ನಾನು ಹಿರಿಯೂರು ಸರ್ಕಾರಿ ಆಸ್ಪತ್ರೆಗೆ ಹೋಗಿದ್ದೆ. ನನ್ನ ಮಗನ ತಲೆಗೆ, ಮೈಕೈಗೆ ಪೆಟ್ಟಾಗಿತ್ತು. ಆರೋಪಿ ದೇವರಾಜ್ ಗೆ ಕೈಕಾಲುಗಳಿಗೆ ಪೆಟ್ಟಾಗಿತ್ತು. ನನ್ನ ಮಗ ಕೆಎ 16 4245 ರ ಬೈಕಿನಲ್ಲಿ ಹೋಗುತ್ತಿದ್ದ. ಅಪಘಾತ ಹೇಗಾಯಿತು , ಯಾರ ತಪ್ಪಿನಿಂದ ಆಯಿತು ಎಂದು ನನಗೆ ಗೊತ್ತಿಲ್ಲ. ಅಪಘಾತ ಪಡಿಸಿದ ವ್ಯಕ್ತಿಯನ್ನು ನಾನು ನೋಡಿಲ್ಲ. ಆರೋಪಿಯನ್ನು ನಾನು ನೋಡಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ದೂರು ನೀಡಿದ್ದೇನೆ. ಸಾಕ್ಷಿ ದೂರನ್ನು ನೋಡಿ ಗುರುತಿಸಿದ್ದು ದಾಖಲೆಯನ್ನು ನಿಪಿ-1 ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಅಪಘಾತವಾದ ಬೈಕನ್ನು ನನ್ನ ವಶಕ್ಕೆ ಪಡೆದುಕೊಂಡಿದ್ದೇನೆ. ನಾನು ಮುಚ್ಚಳಿಕೆ

ಬರೆದುಕೊಟ್ಟು ವಾಹನ ಬಿಡುಗಡೆ ಮಾಡಿಕೊಂಡಿರುತ್ತೇನೆ. ಸದರಿ ದಾಖಲೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ದಾಖಲೆಯನ್ನು ನಿಪಿ-2 ಸಹಿ ನಿಪಿ-2(ಎ) ಎಂದು ಗುರುತಿಸಲಾಯಿತು. ಮುಚ್ಚಳಿಕೆಗೆ 2 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಬೈಕನ್ನು ನನ್ನ ವಶಕ್ಕೆ ಪಡೆಯುವಾಗ ಸಹಿ ಮಾಡಿದ್ದೇನೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ**

ದಿಃ09.02.2023 ರಂದು 4.15 ರ ಸಮಯದಲ್ಲಿ ವಿವಿ ಪುರ ಡ್ಯಾಮ್ ನೋಡಲು ನನ್ನ ಮಗ ಶ್ರೀದರ್ , ದೇವರಾಜ್ ಮತ್ತು ಪ್ರಭು ಇವರು ಕೆಎ 16 ಇಪಿ 4245 ರ ಮೋಟರ್ ಸೈಕಲ್ ನಲ್ಲಿ ವಿ ವಿ ಪುರದ ಕಬ್ಬಿಣದ ಸೇತುವೆ ಹತ್ತಿರ ಹೊಸದುರ್ಗ ಮತ್ತು ಹಿರಿಯೂರು ರಸ್ತೆಯಲ್ಲಿ ಹೋಗುತ್ತಿದ್ದರು ಎಂದರೆ ಸರಿ. ನನ್ನ ಮಗ ಬ್ರೆಕ್ ಹಾಕಿದ್ದರಿಂದ ಶ್ರೀಧರ್ ರಸ್ತೆ ಮೇಲೆ ಬಿದ್ದಿರುತ್ತಾನೆ ಎಂದರೆ ಗೊತ್ತಿಲ್ಲ. ಅದೇ ಸಮಯದಲ್ಲಿ ಕೆಎ 17 ಎಸ್ 9989 ನ್ನು ಆರೋಪಿ ವೇಗವಾಗಿ ಚಾಲನೆ ಮಾಡಿಕೊಂಡು ಬಂದು ಶ್ರೀಧರ್ ಗೆ ಡಿಕ್ಕಿ ಪಡಿಸಿದ ಎಂದರೆ ನನಗೆ ಗೊತ್ತಿಲ್ಲ. ಆಗ ಶ್ರೀಧರ್ ಗೆ ರಕ್ತಗಾಯಗಳಾಗಿತ್ತು ಎಂದರೆ ಗೊತ್ತಿಲ್ಲ. ನಂತರ ವಿಚಾರ ತಿಳಿದು ನಾನು ಆಸ್ಪತ್ರೆಗೆ ಹೋಗಿ ನೋಡಿದಾಗ ಶ್ರೀಧರ್ ಮೃತ ಪಟ್ಟ ಎಂದು ತಿಳಿಯಿತು ಎಂದರೆ ಸರಿ. ಈ ಅಪಘಾತ ಆರೋಪಿ ತಪ್ಪಿನಿಂದ ಆಗಿದೆ ಎಂದರೆ ಗೊತ್ತಿಲ್ಲ. ದಿಃ09.03.2023 ರಂದು ನಾನು ಪೊಲೀಸರಿಗೆ ದೂರು ಕೊಟ್ಟಿದ್ದೇನೆ ಎಂದರೆ ನಿಜ. ಸಾಕ್ಷಿ ಮುಂದುವರೆದು ಅದರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ ನಾನು ಸಹಿ ಮಾತ್ರ ಹಾಕಿದ್ದೇನೆ ಎಂದು ನುಡಿಯುತ್ತಾರೆ . ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಎಂ ಆರ್ ಆರ್ ವಕೀಲರಿಂದ-**

ಅಪಘಾತ ನಾನು ಕಣ್ಣಾರೆ ನೋಡಿಲ್ಲ ಎಂದರೆ ನಿಜ . ಯಾರ ತಪ್ಪಿನಿಂದ ಅಪಘಾತವಾಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೊಲೀಸರು ಸಹಿ ಮಾಡಲು ಹೇಳಿದ್ದರಿಂದ ದಾಖಲೆಗಳಿಗೆ ಸಹಿ ಮಾಡಿದ್ದೇನೆ ಎಂದರೆ ಸರಿ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು